# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1284 |
| ಸದಸ್ಯರ ಹೆಸರು | ಶ್ರೀ ಎಂ.ನಾಗರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 19.12.2024 |
| ಉತ್ತರಿಸಬೇಕಾದ ಸಚಿವರು | ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕೇಂದ್ರ ಸರ್ಕಾರವು "ಮಹಿಳಾ ತಂತ್ರಜ್ಞಾನ (Women Technology Park)" ಒಂದು ಪ್ರದೇಶದಲ್ಲಿ ಮಹಿಳೆಯರ ಜೀವನೋಪಾಯ ವ್ಯವಸ್ಥೆಯನ್ನು ಸುಧಾರಿಸುವ ಗುರಿಯನ್ನು ಹೊಂದಿ, ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಆವಿಷ್ಕಾರಗಳು ಮಧ್ಯಸ್ಥಿಕೆಗಳ ಮೂಲಕ ಜೀವನೋಪಾಯ ವ್ಯವಸ್ಥೆಯ ಬಲವಾದ ಲಿಂಕ್‌ನ್ನು ಆಧರಿಸಿ ಸಾಮಾಜಿಕ ಉದ್ಯಮಶೀಲತೆ ಮತ್ತು ಮಹಿಳಾ ಉದ್ಯೋಗವನ್ನು ಉತ್ತೇಜಿಸುವ ಕಾರ್ಯಕ್ರಮ ಹಮ್ಮಿಕೊಂಡಿದ್ದು, ಇದನ್ನು ರಾಜ್ಯದಲ್ಲೂ ಅನುಷ್ಠಾನಗೊಳಿಸಲಾಗಿದೆಯೇ; | ಕೇಂದ್ರ ಸರ್ಕಾರದ "ಮಹಿಳಾ ತಂತ್ರಜ್ಞಾನ ಉದ್ಯಾನವನ (Women Technology Park)" ಯೋಜನೆಯನ್ನು ರಾಜ್ಯ ಸರ್ಕಾರದ ವಿಜ್ಞಾನ ಮತ್ತು ತಂತ್ರಜ್ಞಾನ ವಿಭಾಗದಿಂದ ಅನುಷ್ಠಾನಗೊಳಿಸಿರುವುದಿಲ್ಲ. |
| ಆ) | ಹಾಗಿದ್ದಲ್ಲಿ, ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಎಷ್ಟು ಮಹಿಳೆಯರು ಈ ಯೋಜನೆ/ಕಾರ್ಯಕ್ರಮದ ಲಾಭ ಪಡೆದಿದ್ದಾರೆ; ಇಲ್ಲವಾದ್ದಲ್ಲಿ, ಈ ಕಾರ್ಯಕ್ರಮದ ಕುರಿತು ಜಾಗೃತಿ ಮೂಡಿಸಲು ಸರ್ಕಾರ ಏನು ಕ್ರಮಗಳನ್ನು ಕೈಗೊಂಡಿದೆ; (ಜಿಲ್ಲಾವಾರು ಮಾಹಿತಿ ನೀಡುವುದು) | ಅನ್ವಯಿಸುವುದಿಲ್ಲ. |

| | | |
|---|---|---|
| ಇ) | ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯಿಂದ ಮಹಿಳೆಯರ ಸಬಲೀಕರಣಕ್ಕಾಗಿ ಈ ಕಾರ್ಯಕ್ರಮವನ್ನು ಹೊರತುಪಡಿಸಿ ಕಳೆದ ಮೂರು ವರ್ಷಗಳಲ್ಲಿ ಕೈಗೊಂಡಿರುವ ಯೋಜನೆ/ಕಾರ್ಯಕ್ರಮಗಳಾವುವು? (ವಿವರ ನೀಡುವುದು) | ವಿಜ್ಞಾನ ಮತ್ತು ತಂತ್ರಜ್ಞಾನ ವಿಭಾಗದಿಂದ ಕಳೆದ ಮೂರು ವರ್ಷಗಳಲ್ಲಿ ಮಹಿಳೆಯರ ಸಬಲೀಕರಣಕ್ಕಾಗಿ ಕೈಗೊಂಡಿರುವ ಯೋಜನೆ/ಕಾರ್ಯಕ್ರಮಗಳ ವಿವರ ಕೆಳಗಿನಂತಿದೆ:<br><br>1. **ಡಿ.ಎಸ್.ಟಿ.-ಪಿ.ಹೆಚ್.ಡಿ. ಶಿಷ್ಯವೇತನ ಯೋಜನೆ:**<br><br>ಸದರಿ ಯೋಜನೆಯಡಿ ವಾರ್ಷಿಕವಾಗಿ ಆಯ್ಕೆ ಮಾಡಲಾಗುವ 60 ಪಿ.ಹೆಚ್.ಡಿ ವಿದ್ಯಾರ್ಥಿಗಳಲ್ಲಿ ಕನಿಷ್ಠ ಶೇ. 30 ಕ್ಕಿಂತಲೂ ಹೆಚ್ಚು ಮಹಿಳಾ ವಿದ್ಯಾರ್ಥಿಗಳಿಗೆ ಮಾಸಿಕ ರೂ.20,000/-ಗಳನ್ನು ಶಿಷ್ಯವೇತನವಾಗಿ ಮೂರು ವರ್ಷಗಳ ಅವಧಿಗೆ ನೀಡಲಾಗುತ್ತಿದೆ.<br><br>2. **ವಿಜ್ಞಾನ ಪ್ರತಿಭಾ ಶೋಧನೆ ಯೋಜನೆ:**<br><br>ಸದರಿ ಯೋಜನೆಯಡಿ ಆಯ್ಕೆ ಮಾಡಲಾಗುವ 320 ಪಿ.ಯು.ಸಿ. ವಿಜ್ಞಾನ ವಿಭಾಗದ ವಿದ್ಯಾರ್ಥಿಗಳಲ್ಲಿ ಕನಿಷ್ಠ ಶೇ. 30 ಕ್ಕಿಂತಲೂ ಹೆಚ್ಚು ಮಹಿಳಾ ವಿದ್ಯಾರ್ಥಿಗಳಿಗೆ ಮಾಸಿಕ ರೂ.1,000/-ಗಳನ್ನು ಶಿಷ್ಯವೇತನವಾಗಿ 18 ತಿಂಗಳ ಅವಧಿಗೆ ನೀಡಲಾಗುತ್ತಿದೆ.<br><br>**3.ಲ್ಯಾಬ್-ಇನ್-ಎ-ಕಿಟ್ ಗಳ ವಿತರಣಾ ಯೋಜನೆ:**<br><br>2022-23ನೇ ಸಾಲಿನಲ್ಲಿ ರಾಜ್ಯದ 169 ಸರ್ಕಾರಿ ಬಾಲಕಿಯರ ಪ್ರೌಢಶಾಲೆಗಳಿಗೆ ಲ್ಯಾಬ್-ಇನ್-ಎ-ಕಿಟ್ ಗಳನ್ನು ಧಾರವಾಡ ಪ್ರಾದೇಶಿಕ ವಿಜ್ಞಾನ ಕೇಂದ್ರದಿಂದ ತಯಾರಿಸಿ, ತರಬೇತಿ ನೀಡಿ ವಿತರಿಸಲಾಗಿದೆ. |

ಸಂಖ್ಯೆ: ಐಟಿಬಿಟಿ 280 ಎಸ್ ಟಿಎಸ್ 2024

(ಎನ್.ಎಸ್. ಭೋಸರಾಜು)
ಮಾನ್ಯ ಸಣ್ಣ ನೀರಾವರಿ ಮತ್ತು
ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು